ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 1/2/2020

# ಸಿಎಎ ಐತಿಹಾಸಿಕವಾದದ್ದು: ರಾಷ್ಟ್ರಪತಿ ಕೋವಿಂದ್

## ಪ್ರತಿಭಟನೆ ಹೆಸರಿನ ಹಿಂಸಾಚಾರಕ್ಕೆ ರಾಷ್ಟ್ರಪತಿ ಆಕ್ಷೇಪ | ಪಾಕ್‌ನಲ್ಲಿ ಅಲ್ಪಸಂಖ್ಯಾತರ ದೌರ್ಜನ್ಯಕ್ಕೂ ಕಿಡಿ

**ನವದೆಹಲಿ:** ನೆರೆಯ ರಾಷ್ಟ್ರಗಳ ಧಾರ್ಮಿಕ ಅಲ್ಪಸಂಖ್ಯಾತರಿಗೆ ಭಾರತೀಯ ಪೌರತ್ವ ಕಲ್ಪಿಸಬೇಕೆಂಬ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಆಕಾಂಕ್ಷೆ ಪರಿಪೂರ್ಣಗೊಳಿಸಿದ ಪೌರತ್ವ ತಿದ್ದುಪಡಿ ಕಾಯ್ದೆ ಐತಿಹಾಸಿಕವಾದದ್ದು ಎಂದು ರಾಷ್ಟ್ರಪತಿ ರಾಮನಾಥ್ ಕೋವಿಂದ್ ಬಣ್ಣಿಸಿದ್ದಾರೆ.



ಸಂಸತ್ತಿನ ಬಜೆಟ್ ಅಧಿವೇಶನದ ಮೊದಲ ದಿನವಾದ ಶುಕ್ರವಾರ ಜಂಟಿ ಸದನವನ್ನುದ್ದೇಶಿಸಿ 70 ನಿಮಿಷಗಳ ಭಾಷಣದಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ ಬಗ್ಗೆ ಮೆಚ್ಚುಗೆ, ದೇಶದಲ್ಲಿ ಪ್ರತಿಭಟನೆಗಳ ಹೆಸರಿನಲ್ಲಿ ಹಿಂಸಾಚಾರದ ಬಗ್ಗೆ ಆಕ್ರೋಶ, ಪಾಕಿಸ್ತಾನದಲ್ಲಿ ಅಲ್ಪಸಂಖ್ಯಾತರಾದ ಸಿಖ್ ಮತ್ತು ಹಿಂದುಗಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ವಿರುದ್ಧ ಕಿಡಿಕಾರಿದರು. ಅಲ್ಲದೆ, ಜಮ್ಮು-ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸುತ್ತಿದ್ದ ಸಂವಿಧಾನದ 370ನೇ ವಿಧಿ ಹಾಗೂ 35(ಎ) ಪರಿಚ್ಛೇದ ರದ್ದು ಬಳಿಕ ಜಮ್ಮು-ಕಾಶ್ಮೀರ ರಾಜ್ಯ ವಿಭಜಿಸಿ ಜಮ್ಮು-ಕಾಶ್ಮೀರ ಹಾಗೂ ಲಡಾಖ್ ಎಂಬ ಕೇಂದ್ರಾಡಳಿತ ಪ್ರದೇಶ ರಚನೆ ಸೇರಿದಂತೆ ನನ್ನ ಸರ್ಕಾರ ಹಲವು ದಿಟ್ಟ ಕ್ರಮಗಳನ್ನು ಕೈಗೊಂಡಿದೆ. ಈ ಮೂಲಕ ಈ ದಶಕವನ್ನು ಭಾರತದ ದಶಕ ಹಾಗೂ ಈ ಶತಮಾನವನ್ನು ಭಾರತದ ಶತಕವಾಗಿ ಪರಿವರ್ತಿಸಿದೆ ಎಂದು ಕೇಂದ್ರದ ಕಾರ್ಯವೈಖರಿ ಬಗ್ಗೆ ಶ್ಲಾಘಿಸಿದರು.

### ಸಂಸತ್‌ನಲ್ಲಿ ಕಪ್ಪು ಪಟ್ಟಿ ಧರಿಸಿ ವಿಪಕ್ಷಗಳ ಪ್ರತಿಭಟನೆ

**ನವದೆಹಲಿ:** ಸಂಸತ್ತಿನ ಬಜೆಟ್ ಅಧಿವೇಶನ ಪ್ರತಿಭಟನೆ ಮೂಲಕವೇ ಆರಂಭವಾಗಿದ್ದು, ಉಭಯ ಸದನಗಳನ್ನು ಉದ್ದೇಶಿಸಿ ಸೆಂಟ್ರಲ್ ಹಾಲ್‌ನಲ್ಲಿ ರಾಷ್ಟ್ರಪತಿಗಳ ಭಾಷಣದ ವೇಳೆ 14 ವಿರೋಧ ಪಕ್ಷಗಳ ನಾಯಕರು ಕಪ್ಪು ತೋಳು ಪಟ್ಟಿ ಧರಿಸಿ ಸಿಎಎ ಹಾಗೂ ಪ್ರಸ್ತಾಪಿತ ಎನ್‌ಆರ್‌ಸಿ ಹಾಗೂ ಎನ್‌ಪಿಆರ್ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.




ಅಲ್ಲದೇ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ, ರಾಜ್ಯಸಭೆ ವಿಪಕ್ಷ ನಾಯಕ ಗುಲಾಂ ನಬಿ ಆಜಾದ್ ಸೇರಿ ವಿರೋಧ ಪಕ್ಷ ನಾಯಕರು ತಮಗೆ ಮೀಸಲಾದ ಆಸನದಲ್ಲಿ ಕುಳಿತುಕೊಳ್ಳದೇ, ಹಿಂದಿನ ಸಾಲಿನಲ್ಲಿ ಕುಳಿತುಕೊಂಡು ಪ್ರತಿಭಟನೆ ವ್ಯಕ್ತಪಡಿಸಿದ್ದಾರೆ. ಜೊತೆಗೆ ಪೌರತ್ವ ತಿದ್ದುಪಡಿ ಕಾಯ್ದೆ ಪರ ಇರುವ ಭಾಷಣದ ಸಾಲುಗಳನ್ನು ರಾಷ್ಟ್ರಪತಿ ಓದುತ್ತಿದ್ದಂತೆಯೇ ಕೆಲ ವಿಪಕ್ಷ ನಾಯಕರು, ಶೇಮ್ ಶೇಮ್ ಎಂದು ಕೂಗಿ, ಪೋಸ್ಟರ್‌ಗಳನ್ನು ಪ್ರದರ್ಶಿಸಿದ್ದಾರೆ. ಅಲ್ಲದೇ ಸಿಎಎ ಪರ ರಾಷ್ಟ್ರಪತಿಗಳ ಭಾಷಣದ ವಿರುದ್ಧ ವಿಪಕ್ಷಗಳು ಗೊತ್ತುವಳಿ ಮಂಡಿಸುವ ಸಾಧ್ಯತೆ ಕೂಡ ಇದೆ.